## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಸಿ.ಶ್ರೀನಿವಾಸ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ಇವರನ್ನು ಸೇವೆಗೆ ಮನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:-

1. ಮು.ಕಾ.ನಿ.ಜಿ.ಪಂ.ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ: ಜಿ.ಪಂ.ಜಿ/ಆಡಳಿತ/ಕಾ.ನಿ.ಅ/ತಾ.ಪಂ.ಜಿ/ಅಮಾನತ್ತು/ಸಿ.ಆರ್/17-18, ದಿನಾಂಕ:11.08.2017.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 112 ವಿಸೇಬಿ 2017 ದಿನಾಂಕ:11.08.2017.
3. ಶ್ರೀ ಸಿ.ಶ್ರೀನಿವಾಸ್ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು, ಪಂಚಾಯತ್ ಚಿಂತಾಮಣಿ ಪ್ರಸ್ತುತ ಅಮಾನತ್ತಿನಲ್ಲಿರುವ ಇವರು ದಿನಾಂಕ:18.08.2017ರಂದು ಸಲ್ಲಿಸಿರುವ ಮನವಿ.
4. ಮಾನ್ಯ ಸಾರಿಗೆ ಸಚಿವರು ಹಾಗೂ ಚಿಕ್ಕಬಳ್ಳಾಪುರ ಸಚಿವರ ಟಿಪ್ಪಣಿ ದಿ:29.08.2017

****

**ಪ್ರಸ್ತಾವನೆ:**

ಮೇಲೆ ಓದಲಾದ 1ನೇ ಪ್ರಸ್ತಾವನೆಯಲ್ಲಿ ಶ್ರೀ ಸಿ.ಶ್ರೀನಿವಾಸ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ರವರು ಚಿಂತಾಮಣಿ ನಗರದ ತಾಲ್ಲೂಕು ಪಂಚಾಯತಿ ಭವನ (ಸಾಮರ್ಥ್ಯ ಸೌಧ ಕಟ್ಟಡ) ನಿರ್ಮಾಣ ಉಳಿಕೆ ಕಾಮಗಾರಿಯ 02, 03 ನೇ ಅಂತಸ್ತು ರೂ.330.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡದ ನಿರ್ಮಾಣಕ್ಕೆ ಸರ್ಕಾರದ ಆದೇಶದಂತೆ ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನಗೊಳಿಸಲು ಸದರಿ ಕಾಮಗಾರಿಯ ಅನುದಾನವನ್ನು ಕಾರ್ಯಪಾಲಕ ಅಭಿಯಂತರರು, ತಾಲ್ಲೂಕು ಪಂಚಾಯತಿ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ಇವರಿಗೆ ವರ್ಗಾಯಿಸದೇ ಹಾಗೂ ಮೇಲಾಧಿಕಾರಿಗಳ ಆದೇಶವನ್ನು ಪರಿಪಾಲಿಸದೇ ನಿರ್ಲಕ್ಷಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಮೇಲೆ ಓದಲಾದ (2)ರ ಆದೇಶದಲ್ಲಿ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 1957ರ ನಿಯಮ 10(1)(ಡಿ)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅಮಾನತ್ತುಗೊಳಿಸಲಾಗಿತ್ತು.

..2..

ಶ್ರೀ ಸಿ.ಶ್ರೀನಿವಾಸ್ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಿಂತಾಮಣಿ ಪ್ರಸ್ತುತ ಅಮಾನತ್ತಿನಲ್ಲಿರುವ ಇವರು ಮೇಲೆ ಓದಲಾದ (3)ರ ಮನವಿಯಲ್ಲಿ ತಾಲ್ಲೂಕು ಪಂಚಾಯತಿಯ ನೂತನ ಭವನದ (ಸಾಮರ್ಥ್ಯ ಸೌಧ) 2ನೇ ಮತ್ತು 3ನೇ ಅಂತಸ್ತುಗಳ ಕಾಮಗಾರಿಗೆ ಸಂಬಂಧಿಸಿದಂತೆ ಟೆಂಡರ್ ಕರೆದು ಕಾಮಗಾರಿ ಅನುಷ್ಠಾನಗೊಳಿಸಲು ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ಇವರನ್ನು ಕೋರಿದರೂ ಸುಮಾರು 1 ವರ್ಷ ಕಾಲ ವಿಳಂಬ ಮಾಡಿರುವುದರಿಂದ ಕಟ್ಟಡ ನಿರ್ಮಾಣ ಕಾಮಗಾರಿಯಲಿ ವಿಳಂಬವಾಗಿದೆಯೇ ಹೊರತು ಅವರಿಂದ ವಿಳಂಬವಾಗಿರುವುದುಲ್ಲವೆಂದು ತಿಳಿಸುತ್ತಾ ಸೇವೆಗೆ ಪುನರ್ ಸ್ಥಾಪಿಸುವಂತೆ ಮನವಿಯನ್ನು ಸಲ್ಲಿಸಿರುತ್ತಾರೆ.

ಈ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಸದರಿ ಅಧಿಕಾರಿಯು ಮೇಲೆ ಓದಲಾದ 2ರ ಮನವಿಯಲ್ಲಿ ಪ್ರಸ್ತಾಪಿಸಿರುವ ಅಂಶಗಳನ್ನು ಪರಿಶೀಲಿಸುತ್ತಾ, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಶ್ರೀ ಸಿ.ಶ್ರೀನಿವಾಸ್ ಇವರನ್ನು ಅಮಾನತ್ತಿನಿಂದ ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 212 ವಿಸೇಬಿ 2017 ಬೆಂಗಳೂರು ದಿನಾಂಕ:16-09-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸಿ.ಶ್ರೀನಿವಾಸ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ ಇವರನ್ನು ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಸೇವೆಗೆ ಪುನರ್ ಸ್ಥಾಪಿಸಿ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಿಂತಾಮಣಿಯಲ್ಲಿಯೇ ಮುಂದುವರೆಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು**
**ಅವರ ಹೆಸರಿನಲ್ಲಿ**

16/09/17

(ಡಿ.ಎಸ್.ವಿಜಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.

..3..

3) ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ)
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು.
4) ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂತಾಮಣಿ.

ಪ್ರತಿಯನ್ನು,

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು. ಅರಣ್ಯ ಪರಿಸರ ಮತ್ತು ಜೀವಿ ಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.